Akashvani : Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

01.11.2024 18.40 hrs

<><*<><>*><>

<u>ಮುಖ್ಯಾಂಶಗಳು</u>

- ರಾಜ್ಯದೆಲ್ಲೆಡೆ ಕನ್ನಡ ರಾಜ್ಯೋತ್ಸವದ ಮೆರುಗು; ವಿವಿಧೆಡೆ ಸಾಂಸ್ಕೃತಿಕ ಕಾರ್ಯಕ್ರಮ
- ರಾಜ್ಯೋತ್ಸವ ಮತ್ತು ಕರ್ನಾಟಕ ಸಂಭ್ರಮ-೫೦ ಸುವರ್ಣ ಮಹೋತ್ಸವ ಪ್ರಶಸ್ತಿ ಪ್ರದಾನ ಸಮಾರಂಭಕ್ಕೆ ಮುಖ್ಯಮಂತ್ರಿ ಚಾಲನೆ
- ರಾಜ್ಯ ಮಟ್ಟದ ಖಾದಿ ಗ್ರಾಮೋದ್ಯೋಗ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳಕ್ಕೆ ಸಚಿವ ಎಂ.ಬಿ.ಪಾಟೀಲ್ ಚಾಲನೆ
- ತುಮಕೂರಿನಲ್ಲಿ ಕೃಷಿ ಅಭಿವೃದ್ಧಿಯೊಂದಿಗೆ ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿಗೆ ಆದ್ಯತೆ; ಗೃಹ ಸಚಿವ ಡಾ.ಜಿ.ಪರಮೇಶ್ವರ್

<><*<><>*><>

ಎರಡು ಸಾವಿರ ವರ್ಷಗಳ ಇತಿಹಾಸ ಇರುವ ಕನ್ನಡ ಭಾಷೆಯನ್ನು ಉಳಿಸಿ ಬೆಳೆಸುವುದು ಪ್ರತಿಯೊಬ್ಬ ಕನ್ನಡಿಗರ ಅದ್ಯ ಕರ್ತವ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಇಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ವತಿಯಿಂದ ಕಂಠೀರವ ಹೊರಾಂಗಣ ಕ್ರೀಡಾಂಗಣದಲ್ಲಿ ಹಮ್ಮಿಕೊಂಡಿದ್ದ ೬೯ ನೇ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ನಾಡದೇವಿ ಭುವನೇಶ್ವರಿಗೆ ಪುಷ್ಪಾರ್ಚನೆ ಸಲ್ಲಿಸಿ ನಂತರ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಮುಖ್ಯಮಂತ್ರಿ, ಇಡೀ ಕರ್ನಾಟಕದಾದ್ಯಂತ ವಿಜೃಂಭಣೆಯಿಂದ ರಾಜ್ಯೋತ್ಸವವನ್ನು ಆಚರಿಸುತ್ತಿದ್ದು, ಕನ್ನಡ ನಾಡಿನ ಸಮಸ್ತ ಜನತೆಗೆ ಕನ್ನಡ ರಾಜ್ಯೋತ್ಸವದ ಶುಭಾಷಯ ಕೋರಿದರು. ಭಾಷೆಯನ್ನು ಬೆಳೆಸಿ ಉಳಿಸಲು ಮೊದಲು ಕನ್ನಡಿಗರಾಗಿ, ಕನ್ನಡೇತರರಿಗೆ ಕನ್ನಡವನ್ನು ಕಲಿಸಲು ಪ್ರಯತ್ನಿಸುವ ಮೂಲಕ ಕನ್ನಡ ವಾತಾವರಣವನ್ನು ನಿರ್ಮಿಸಿ ಎಂದು ರಾಜ್ಯದ ಜನರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು. ಕರ್ನಾಟಕಕ್ಕೆ ತೆರಿಗೆ ಪಾಲು ನೀಡುವುದರಲ್ಲಿ ಕೇಂದ್ರ ಸರ್ಕಾರದಿಂದ ಅನ್ಯಾಯವಾಗುತ್ತಿದೆ. ಇಡೀ ದೇಶದಲ್ಲೇ ಅತಿ ಹೆಚ್ಚು ತೆರಿಗೆ ನೀಡುವ ಎರಡನೇ ರಾಜ್ಯ ಕರ್ನಾಟಕವಾಗಿದೆ. ೪ ಲಕ್ಷ ಕೋಟಿಗೂ ಹೆಚ್ಚು ತೆರಿಗೆ ನೀಡಿದರೂ, ಕೇಂದ್ರದಿಂದ ದೊರೆಯುವ ತೆರಿಗೆ ಪಾಲು ಕೇವಲ ೫೦ ರಿಂದ ೬೦ ಸಾವಿರ ಕೋಟಿ ಮಾತ್ರ. ರಾಜ್ಯಕ್ಕೆ ನ್ಯಾಯಯುತವಾಗಿ ಬರಬೇಕಾದ ತೆರಿಗೆ ಪಾಲನ್ನು ನೀಡಿ ಎಂದು ಕೇಂದ್ರಕ್ಕೆ ಮನವಿ ಮಾಡಲಾಗುತ್ತಿದೆ ಎಂದರು.

ಬಡ ಮಕ್ಕಳಿಗೂ ಗುಣಮಟ್ಟದ ಶಿಕ್ಷಣ ನೀಡಬೇಕೆಂಬ ಉದ್ದೇಶದಿಂದ ಪೌಷ್ಠಿಕಾಂಶ ಆಹಾರ ನೀಡಲಾಗುತ್ತಿದೆ ಹಾಗೂ ಕನ್ನಡ ಸ್ಪಷ್ಟವಾಗಿ ಬರೆಯಲು ಮತ್ತು ಓದಲು ಬಾರದವರಿಗೆ ಕನ್ನಡ ಕಲಿಸುವ ಉದ್ದೇಶದಿಂದ “ಕನ್ನಡ ದೀವಿಗೆ” ಕಿರುಹೊತ್ತಿಗೆಯನ್ನು ಇಂದು ಲೋಕಾರ್ಪಣೆ ಮಾಡಲಾಗಿದೆ ಎಂದರು. ಬಳಿಕ ಮಾತನಾಡಿದ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವ ಮಧು ಬಂಗಾರಪ್ಪ, ರಾಜ್ಯದಲ್ಲಿ ಪ್ರತಿ ದಿನ ೫೭ ಲಕ್ಷ ಶಾಲಾ ಮಕ್ಕಳಿಗೆ ವಾರದ ಆರೂ ದಿನಗಳು ಮೊಟ್ಟೆ ಹಾಗೂ ಚಿಕ್ಕಿಯನ್ನು ನೀಡಲಾಗುತ್ತಿದೆ. ಮಕ್ಕಳಿಗೆ ಹಾಲಿನ ಜೊತೆ ಸಾಯಿ ಅನ್ನಪೂರ್ಣ ಅವರ ಸಹಯೋಗದೊಂದಿಗೆ ರಾಗಿಮಾಲ್ಟ್ ನ್ನೂ ನೀಡಲಾಗುತ್ತಿದೆ. ಬಡವರ ಮಕ್ಕಳು ಅಪೌಷ್ಟಿಕತೆಯಿಂದ ಬಳಲಬಾರದು, ಗುಣಮಟ್ಟದ ಶಿಕ್ಷಣ ದೊರೆಯಬೇಕೆಂಬುದು ಸರ್ಕಾರದ ಉದ್ದೇಶ ಎಂದು ತಿಳಿಸಿದರು. ಈ ವೇಳೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಶಾಸಕ ರಿಜ್ವಾನ್ ಅರ್ಷದ್ ಸೇರಿ ಇತರೆ ಗಣ್ಯರು ಭಾಗವಹಿಸಿದ್ದರು.

<><*<><>*><>

ವಿಧಾನಸೌಧದ ಮುಂಭಾಗದಲ್ಲಿ ನಡೆಯುತ್ತಿರುವ ರಾಜ್ಯೋತ್ಸವ ಪ್ರಶಸ್ತಿ ೨೦೨೪ ಮತ್ತು ಕರ್ನಾಟಕ ಸಂಭ್ರಮ-೫೦ರ ಸುವರ್ಣ ಮಹೋತ್ಸವ ಪ್ರಶಸ್ತಿ ಪ್ರದಾನ ಹಾಗೂ ಸಮಾರೋಪ ಸಮಾರಂಭವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಿದರು. ಬಳಿಕ ಮಾತನಾಡಿದ ಸಚಿವ ಶಿವರಾಜ್ ತಂಗಡಗಿ, ಕನ್ನಡ ಭಾಷೆ ಮತ್ತು ಸಂಸ್ಕೃತಿಯನ್ನು ಉಳಿಸಲು ರಾಜ್ಯ ಸರ್ಕಾರ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಕರ್ನಾಟಕ ನಾಮಕರಣಗೊಂಡು ೫೦ ವರ್ಷದ ಸಂಭ್ರಮಾಚರಣೆಯ ಭಾಗವಾಗಿ ವಿಶೇಷ ಅಂಚೆ ಚೀಟಿಗಳನ್ನು ಹೊರತಂದಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದಾರೆ. ಈ ಬಾರಿ ೬೯ ಸಾಧಕರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದೆ. ವಿಶೇಷವಾಗಿ ಕರ್ನಾಟಕ ಸಂಭ್ರಮ-೫೦ ಅಭಿಯಾನದ ಸುವರ್ಣ ಮಹೋತ್ಸವ ಪ್ರಶಸ್ತಿಯ ಮೊತ್ತವನ್ನು ೫೦ ಸಾವಿರದಿಂದ ೧ ಲಕ್ಷ ರೂಪಾಯಿಗೆ ಹೆಚ್ಚಳ ಮಾಡಲಾಗಿದೆ.

<><*<><>*><>

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕನ್ನಡ ರಾಜ್ಯೋತ್ಸವವನ್ನು ಸಡಗರ-ಸಂಭ್ರಮದಿಂದ ಆಚರಿಸಲಾಯಿತು. ಆಯ ಜಿಲ್ಲಾ ಉಸ್ತುವರಿ ಸಚಿವರು ಧ್ವಜರೋಹಣ ನೆರವೇರಿಸಿ, ಹಲ್ಮಿಡಿ ಶಾಸನದ ಪ್ರತಿಕೃತಿಯನ್ನು ಅನಾವರಣಗೊಳಿಸಿದರು. ಸಾಮರಸ್ಯ, ಸರ್ವಧರ್ಮಗಳ

ಸಮನ್ವಯತೆ, ಸೌಹಾರ್ದತೆಗೆ ಕರ್ನಾಟಕ ಮುಕುಟ ಮಣಿಯಾಗಿದೆ. ರಾಜ್ಯದ ಸಂಸ್ಕೃತಿ, ಜೀವನ ಪದ್ಧತಿ ವೈವಿಧ್ಯಮಯವಾಗಿದ್ದು, ಹಲವು ಧರ್ಮ, ಬುಡಕಟ್ಟು ಜನಾಂಗ ಹಾಗೂ ರೈತರ ಕರ್ಮಭೂಮಿಯಾಗಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಅಭಿಪ್ರಾಯಪಟ್ಟರು. ದಕ್ಷಿಣ ಕನ್ನಡ ಜಿಲ್ಲಾಡಳಿತದ ವತಿಯಿಂದ ಇಂದು ನಡೆದ ಜಿಲ್ಲಾ ಮಟ್ಟದ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಧ್ವಜಾರೋಹಣ ನೆರವೇರಿಸಿ ಅವರು ರಾಜ್ಯೋತ್ಸವ ಸಂದೇಶ ನೀಡಿದರು. ಎಲ್ಲ ಧಾರ್ಮಿಕ ಹಬ್ಬಗಳು ವರ್ಷಕ್ಕೊಮ್ಮೆ ಬರುತ್ತವೆ ಆದರೆ ಕನ್ನಡ ಹಬ್ಬ ವರ್ಷ ಪೂರ್ತಿ ಇರುತ್ತದೆ ಎಂದು ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹ್ಮದ್ ಖಾನ್ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಹೇಳಿದರು. ರಾಜ್ಯೋತ್ಸವ ಆಚರಣೆಗೂ ಮುನ್ನ ಜಿಲ್ಲಾಧಿಕಾರಿಗಳ ಕಚೇರಿಯ ಆವರಣದಲ್ಲಿ ಹಲ್ಮಿಡಿ ಶಾಸನದ ಪ್ರತಿಕೃತಿ ಉದ್ಘಾಟನೆ ನಡೆಯಿತು. ಕಾರವಾರದ ಪೊಲೀಸ್ ಪರೇಡ್ ಮೈದಾನದಲ್ಲಿ ಜಿಲ್ಲಾಡಳಿತದ ವತಿಯಿಂದ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ಎಸ್. ವೈದ್ಯ, ರಾಜ್ಯದಲ್ಲಿ ಕನ್ನಡವೇ ಆಡಳಿತ ಭಾಷೆಯಾಗಿದ್ದು, ರಾಜ್ಯದ ಆಡಳಿತ ವ್ಯವಸ್ಥೆಯಲ್ಲಿ ಎಲ್ಲಾ ಕಚೇರಿಗಳಲ್ಲಿ ಹಾಗೂ ಸಾರ್ವಜನಿಕರು ವ್ಯವಹರಿಸುವ ಭಾಷೆಯಾಗಿ ಕೂಡಾ ಕನ್ನಡವನ್ನೇ ಬಳಸಲಾಗುತ್ತಿದ್ದು, ಕನ್ನಡ ಭಾಷೆಯ ಬೆಳವಣಿಗೆಗೆ ಸರ್ಕಾರವು ಎಲ್ಲಾ ರೀತಿಯ ಬೆಂಬಲ ನೀಡುತ್ತಿದೆ ಎಂದು ಹೇಳಿದರು. ಕಲಬುರಗಿ ನಗರದಲ್ಲಿ ಹಲ್ಮಿಡಿ ಶಾಸನದ ಪ್ರತಿಕೃತಿಯನ್ನು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅನಾವರಣಗೊಳಿಸುವರು. ಕರ್ನಾಟಕ ರಾಜ್ಯೋತ್ಸವದ ದಿನಾಚರಣೆ ಹಿನ್ನೆಲೆಯಲ್ಲಿ ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ರಕ್ತದಾನ ಶಿಬಿರ ಆಯೋಜಿಸುವ ಮೂಲಕ ಕರ್ನಾಟಕ ಸುವರ್ಣ ಸಂಭ್ರಮ-೫೦ ಕಾರ್ಯಕ್ರವನ್ನು ವಿಶಿಷ್ಠ ಮತ್ತು ಅರ್ಥಪೂರ್ಣವಾಗಿ ಆಚರಿಸಲಾಯಿತು. ರಕ್ತದಾನ ಶಿಬಿರ ಉದ್ಘಾಟಿಸಿ ಮಾತನಾಡಿದ ಕಲಬುರಗಿ ಕೇಂದ್ರ ಕಾರಾಗೃಹದ ಮುಖ್ಯ ಅಧೀಕ್ಷಕಿ ಡಾ.ಅನಿತಾ ಆರ್, ರಕ್ತದಾನ ಮಹಾದಾನವಾಗಿದೆ. ಪ್ರತಿಯೊಬ್ಬರು ರಕ್ತದಾನ ಮಾಡಬೇಕು. ಈ ಕುರಿತು ಇತರರಿಗೂ ಅರಿವು ಮೂಡಿಸುವ ಮೂಲಕ ರಕ್ತದಾನಕ್ಕೆ ಪ್ರೋತ್ಸಾಹಿಸಬೇಕೆಂದು ಕರೆ ನೀಡಿದರು. ರಾಯಚೂರು ಜಿಲ್ಲಾಧಿಕಾರಿ ಕಚೇರಿಯ ಆವರಣದಲ್ಲಿ ಕರ್ನಾಟಕ ಸಂಭ್ರಮ-೫೦ರ ಅಂಗವಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಹಾಗೂ ಜಿಲ್ಲಾಡಳಿತ ರಾಯಚೂರು ಸಂಯುಕ್ತಾಶ್ರಯದಲ್ಲಿ ನಡೆದ ಹಲ್ಮಿಡಿ ಶಾಸನದ ಪ್ರತಿಕೃತಿ ಅನಾವರಣ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಶರಣ ಪ್ರಕಾಶ್ ಪಾಟೀಲ್ ಭಾಗವಹಿಸಿದ್ದರು. ಉಡುಪಿ ಜಿಲ್ಲೆಯಲ್ಲಿ ನಡೆದ ರಜ್ಯೋತ್ಸವ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಧ್ವಜಾರೋಹಣ ನೆರವೇರಿಸಿ, ಕರ್ನಾಟಕ ರಾಜ್ಯೋತ್ಸವದ ಸಂದೇಶ ನೀಡಿದರು. ಬಳಿಕ ನಡೆದ ಮೆರವಣಿಗೆಯಲ್ಲಿ ಭಾಗವಹಿಸಿದ ಸ್ಥಬ್ದಚಿತ್ರಗಳಲ್ಲಿ ಕರ್ನಾಟಕ ರಾಜ್ಯದ ಕೃಷಿ ಇಲಾಖೆ ಪ್ರಥಮ ಸ್ಥಾನ, ಪ್ರವಾಸೋದ್ಯಮ ಇಲಾಖೆ ದ್ವಿತೀಯ ಸ್ಥಾನ ಹಾಗೂ ತೋಟಗಾರಿಕಾ ಇಲಾಖೆ ತೃತೀಯ ಸ್ಥಾನ

ಪಡೆದಿದೆ. ಕೋಲಾರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಬೈರತಿ ಸುರೇಶ್ ಮಾತನಾಡಿ, ಕೋಲಾರ ಗಡಿ ಜಿಲ್ಲೆಯಾಗಿರುವುದರಿಂದ ಇಲ್ಲಿ ತೆಲುಗು ಹಾಗೂ ತಮಿಳು ಭಾಷೆಯ ಪ್ರಭಾವವಿದೆ. ಆದರೆ, ಮನೆಯಲ್ಲಿ ಯಾವುದೇ ಭಾಷೆ ಮಾತನಾಡಿದರೂ, ಕನ್ನಡದ ಬಗ್ಗೆ ಗೌರವವಿರಲಿ ಎಂದು ತಿಳಿಸಿದರು. ಸಾವಿರಾರು ವರ್ಷಗಳ ಇತಿಹಾಸವಿರುವ ಕನ್ನಡ ಭಾಷೆಯನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಪ್ರತಿಯೊಬ್ಬ ಕನ್ನಡಿಗನ ಮೇಲಿದೆ ಎಂದು ಚಿಕ್ಕಬಳ್ಳಾಪುರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಅಭಿಪ್ರಾಯಪಟ್ಟಿದ್ದಾರೆ. ಧಾರವಾಡದ ಆರ್.ಎನ್.ಶೆಟ್ಟಿ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತದಿಂದ ಆಯೋಜಿಸಿದ್ದ ೬೯ನೇ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ರಾಷ್ಟ್ರ ಧ್ವಜಾರೋಹಣ ನೆರವೇರಿಸಿದರು. ರಾಜ್ಯಕ್ಕೆ ಕರ್ನಾಟಕ ಎಂಬ ಹೆಸರು ನಾಮಕರಣಗೊಂಡು ೫೦ ವರ್ಷ ತುಂಬಿದ ಹಿನ್ನೆಲೆಯಲ್ಲಿ ದಾವಣಗೆರೆ ಜಿಲ್ಲಾದ್ಯಂತ ನವೆಂಬರ್ ತಿಂಗಳ ಪೂರ್ಣ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಹೇಳಿದ್ದಾರೆ. ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ೩೩ ಸಾಧಕರನ್ನು ಸನ್ಮಾನಿಸಲಾಯಿತು.ಕೊಡಗು ಜಿಲ್ಲೆಯಲ್ಲಿ ಜರುಗಿದ ಕಾರ್ಯಕ್ರಮದಲ್ಲಿ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್.ಬೋಸರಾಜು, ಸಾಹಿತ್ಯ, ಸಂಸ್ಕೃತಿ, ಸಂಗೀತ, ಸದಭಿರುಚಿ, ಸಂಪ್ರದಾಯ, ಸಂಸ್ಕಾರ ಯಾವುದೇ ಕ್ಷೇತ್ರದಲ್ಲೂ ಕನ್ನಡಿಗರು ಕಡಿಮೆಯಿಲ್ಲ. ಇಂತಹ ಪವಿತ್ರ ನೆಲದಲ್ಲಿ ಜನಿಸಿದ ನಾವೆಲ್ಲರೂ ಪುಣ್ಯವಂತರು ಎಂದರು. ಗಡಿ ಜಿಲ್ಲೆ ಬೆಳಗಾವಿಯಲ್ಲಿ ಅತ್ಯಂತ ಸಡಗರ ಸಂಭ್ರಮದಿಂದ ರಾಜ್ಯೋತ್ಸವ ಆಚರಿಸಲಾಯಿತು. ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಭುವನೇಶ್ವರಿ ಪ್ರತಿಮೆಗೆ ಪೂಜೆ ಸಲ್ಲಿಸಿ, ಧ್ವಜಾರೋಹಣ ನೆರವೇರಿಸಿ ಗೌರವ ವಂದನೆ ಸ್ವೀಕರಿಸಿದರು.

<><*<><>*><>

ಖಾದಿ ದೇಶದ ಅಸ್ಮಿತೆಯಾಗಿದ್ದು, ಇದನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಖಾದಿ ಬಳಕೆಗೆ ಉತ್ತೇಜನ ನೀಡುವ ಅತ್ಯಗತ್ಯವಾಗಿದೆ ಎಂದು ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ.ಪಾಟೀಲ ಹೇಳಿದ್ದಾರೆ. ವಿಜಯಪುರದಲ್ಲಿ ಆಯೋಜಿಸಿರುವ ರಾಜ್ಯ ಮಟ್ಟದ ಖಾದಿ ಮತ್ತು ಗ್ರಾಮೋದ್ಯೋಗ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳದ ಖಾದಿ ಉತ್ಸವ-೨೦೨೪ಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.ಭಾರತದ ಸ್ವಾತಂತ್ರ್ಯ ಚಳವಳಿಯ ಸಂದರ್ಭದಲ್ಲಿ ರಾಷ್ಟ್ರಪಿತ ಮಹಾತ್ಮಗಾಂಧೀಜಿಯವರು ವಿದೇಶಿ ಉತ್ಪನ್ನಗಳಿಗೆ ಕಡಿವಾಣ ಹಾಕಿ ಖಾದಿ ಉತ್ಪನ್ನಗಳನ್ನು ಸ್ವ ನೇಯುವ ಮೂಲಕ ಸ್ವದೇಶಿ ಉತ್ಪನ್ನಕ್ಕೆ ಹೆಚ್ಚಿನ ಆದ್ಯತೆ ನೀಡಿದ್ದರು. ಖಾದಿಗೆ ವಿಶ್ವ ಮಟ್ಟದಲ್ಲಿ ಬ್ರ್ಯಾಂಡ್ ಸೃಷ್ಟಿ ಮಾಡುವ ಅವಶ್ಯಕತೆ ಇದೆ. ಈ ದಿಸೆಯಲ್ಲಿ ಚಿಂತನೆ ಮಾಡಬೇಕಾಗಿದೆ. ಈ ನಿಟ್ಟಿನಲ್ಲಿ ಸರ್ಕಾರದ ಮಟ್ಟದಲ್ಲಿಯೂ ಸಹ ಗಮನ ಸೆಳೆಯಲಾಗುವುದು ಎಂದು ಅವರು

ಹೇಳಿದರು. ೧೫ ದಿನಗಳ ಆಯೋಜಿಸಿರುವ ಖಾದಿ ಉತ್ಪನ್ನಗಳ ಪ್ರದರ್ಶನ ಹಾಗೂ ಮಾರಾಟ ಮೇಳದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಿ ಖಾದಿ ಉತ್ಪನ್ನಗಳನ್ನು ಖರೀದಿಸುವ ಮೂಲಕ ಉತ್ತೇಜನ ನೀಡಬೇಕು ಎಂದು ಮನವಿ ಮಾಡಿಕೊಂಡರು. ಮೇಳದಲ್ಲಿ ರಾಜ್ಯದ ಹಾಗೂ ಹೊರ ರಾಜ್ಯಗಳಿಂದ ೭೫ ವಸ್ತು ಪ್ರದರ್ಶನ ಹಾಗೂ ಮಾರಾಟ ಮಳಿಗೆಗಳನ್ನು ಸ್ಥಾಪಿಸಲಾಗಿದೆ.

<><*<><>*><>

ತುಮಕೂರು ಜಿಲ್ಲೆಯಲ್ಲಿ ಕೈಗಾರಿಕೆಗಳನ್ನು ಉತ್ತೇಜಿಸಲು “ತುಮಕೂರು ಇಂಡಸ್ಟ್ರೀಯಲ್ ಟೌನ್‌ಶಿಪ್ ಸ್ಥಾಪನೆಗೆ ಯೋಜಿಸಲಾಗಿದ್ದು, ಇದರ ಅನುಷ್ಠಾನಕ್ಕಾಗಿ ೯೪೮ ಕೋಟಿ ರೂಪಾಯಿ ವೆಚ್ಚದಲ್ಲಿ ಕೈಗಾರಿಕೆಗೆ ಅಗತ್ಯವಿರುವ ಮೂಲಭೂತ ಸೌಕರ್ಯಗಳ ನಿರ್ವಹಣೆಯನ್ನು ಪ್ರತಿಷ್ಠಿತ ಸಂಸ್ಥೆಗೆ ವಹಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಹಾಗೂ ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದರು. ಜಿಲ್ಲಾಡಳಿತದ ವತಿಯಿಂದ ನಗರದ ಜಿಲ್ಲಾ ಮಹಾತ್ಮಗಾಂಧಿ ಕ್ರೀಡಾಂಗಣದಲ್ಲಿ ಹಮ್ಮಿಕೊಂಡಿದ್ದ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಕೃಷಿ ಅಭಿವೃದ್ಧಿಯೊಂದಿಗೆ ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿಗೆ ಆದ್ಯತೆ ನೀಡಿದ್ದು, ಮಧುಗಿರಿ ತಾಲೂಕಿನ ನಾಲ್ಕು ಗ್ರಾಮಗಳಲ್ಲಿ ಕೈಗಾರಿಕಾ ಘಟಕ ಸ್ಥಾಪನೆಗೆ ಕ್ರಮ ವಹಿಸಲಾಗಿದೆ ಎಂದರು. ಜಿಲ್ಲಾದ್ಯಂತ ವಾಡಿಕೆಗಿಂತ ಶೇಕಡ ೪೯ರಷ್ಟು ಹೆಚ್ಚುವರಿ ಮಳೆಯಾಗಿದೆ, ಉತ್ತಮ ಮಳೆಯಿಂದ ಈವರೆಗೂ ೩.೦೮ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದ್ದು, ಸಹಾಯಧನ ಆಧಾರದಲ್ಲಿ ಜಿಲ್ಲೆಯ ೧.೫೨ ಲಕ್ಷ ರೈತರಿಗೆ ಮುಂಗಾರು ಹಂಗಾಮಿಗಾಗಿ ೧೮ ಸಾವಿರ ಕ್ವಿಂಟಾಲ್ ಗುಣಮಟ್ಟದ ಬಿತ್ತನೆ ಬೀಜವನ್ನು ವಿತರಿಸಲಾಗಿದೆ ಎಂದು ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ೬೯ ಸಾಧಕರನ್ನು ಗೌರವಿಸಲಾಯಿತು.

<><*<><>*><>

ಹಾವೇರಿ ಜಿಲ್ಲೆ ಶಿಗ್ಗಾವಿ ಸವಣೂರು ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯಲ್ಲಿ ಮತದಾನ ಪ್ರಮಾಣ ಹೆಚ್ಚಿಸಲು ನಿರಂತರವಾಗಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅಕ್ಷಯ್ ಶ್ರೀಧರ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

ಧ್ವನಿ: ಅಕ್ಷಯ್ ಶ್ರೀಧರ

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>